**ಉತ್ತರ ಕನ್ನಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವ ಕಛೇರಿ, ಕಾರವಾರ ನೇಮಕಾತಿ**

**ಅಧಿಸೂಚನೆ ಸಂಖ್ಯೆ 1/2024**

**ದಿನಾಂಕ: 14/06/2024**

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಆರಂಭದ ದಿನಾಂಕ: 20/06/2024**

**ಕೊನೆಯ ದಿನಾಂಕ: 19/07/2024 ರ ರಾತ್ರಿ 11.59 ಗಂಟೆಯವರೆಗೆ**

**ಆನ್‌ಲೆನ್ ಅಂದರೆ ಡೆಬಿಟ್ ಕಾರ್ಡ/ಕ್ರೆಡಿಟ್ ಕಾರ್ಡ/ಯು.ಪಿ.ಐ/ನೆಟ್ ಬ್ಯಾಂಕಿಂಗ್**

**ಮುಖಾಂತರ ಶುಲ್ಕ ಪಾವತಿಸಲು 20/07/2024 ರಾತ್ರಿ 11.59 ರವರೆಗೆ ಅವಕಾಶ ಇರುತ್ತದೆ.**

ವಿಷಯ: ಉತ್ತರ ಕನ್ನಡ ಕಾರವಾರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಬೆರಳಚ್ಚುಗಾರ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ: ಉಚ್ಚನ್ಯಾಯಾಲಯ ಪತ್ರ ಸಂಖ್ಯೆ ಎಲ್‌ಸಿಎ-2/128/12 ದಿನಾಂಕ:21/12/2019, 27/01/2022 ಮತ್ತು 11/09/2023.

*****

ಉತ್ತರ ಕನ್ನಡ ಕಾರವಾರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಹುದ್ದೆ ಒಟ್ಟು 3 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಬಾಹ್ಯ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಕಾರವಾರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://uttarakannada.dcourts.gov.in/notice-category/recruitments/. ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: **20/06/2024** ರಿಂದ ದಿನಾಂಕ: **19/07/2024** ರ ರಾತ್ರಿ 11.59 ರವರೆಗೆ ಸಲ್ಲಿಸಬಹುದು ಮತ್ತು ಪೂರ್ಣ ಅರ್ಜಿಯನ್ನು ಸಲ್ಲಿಸಿದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: **20/07/2024** ಆಗಿರುತ್ತದೆ. ಆನ್‌ಲೈನ್ ಹೊರತುಪಡಿಸಿ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಬೆರಳಚ್ಚುಗಾರ (Typist): ಒಟ್ಟು 3 ಹುದ್ದೆಗಳು**

ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಲಭ್ಯವಿರುವ ಇತರ ಭತ್ಯೆಗಳು.

## ಹುದ್ದೆಗಳ ವರ್ಗೀಕರಣ

| ಪ್ರವರ್ಗ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|
| ಪರಿಶಿಷ್ಟ ಜಾತಿ | 1 | – | – | – | 1 |
| ಪರಿಶಿಷ್ಟ ಪಂಗಡ | 1 | – | – | – | 1 |
| ಪ್ರವರ್ಗ–I | – | – | – | – | – |
| ಪ್ರವರ್ಗ–II(ಎ) | – | – | – | – | – |
| ಪ್ರವರ್ಗ–III(ಬಿ) | – | – | – | – | – |
| ಸಾಮಾನ್ಯ | 1 | – | – | – | 1 |
| ಒಟ್ಟು | 3 | – | – | – | 3 |

* ಅಂಧ ಮತ್ತು ದೃಷ್ಟಿಮಾಂಧ್ಯ (Blind and low vision)

ಶೈಕ್ಷಣಿಕ ವಿದ್ಯಾರ್ಹತೆಃ

1. ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಕಮರ್ಷಿಯಲ್ ಪ್ರಾಕ್ಟೀಸನಲ್ಲಿ ಮೂರು ವರ್ಷಗಳ ಡಿಪ್ಲೋಮಾ (Three years Diploma in Commercial Practice) ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗಾಗಿ ಹೊಂದಿರಬೇಕು.

2. ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಪ್ರೌಢದರ್ಜೆ ಬೆರಳಚ್ಚು (Senior Grade Typewriting) ಪರೀಕ್ಷೆಯಲ್ಲಿ ಅಥವಾ ಸ್ಕ್ರೆಟರಿಯಲ್ ಪ್ರಾಕ್ಟೀಸ್ ಡಿಪ್ಲೋಮಾ (Diploma in Secretarial Practice) ಪರೀಕ್ಷೆಯಲ್ಲಿ ಉತ್ತಿರೇರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗಾಗಿ ಹೊಂದಿರಬೇಕು.

3. ಕಛೇರಿ ಕಾರ್ಯಕಲಾಪಗಳಿಗೆ ಸಂಬಂಧಿಸಿದಂತೆ ಗಣಕಯಂತ್ರದ (ಕಂಪ್ಯೂಟರ್) ಜ್ಞಾನ ಅವಶ್ಯಕವಾಗಿರುತ್ತದೆ.

ಆಯ್ಕೆ ವಿಧಾನಃ

1. ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು)(ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2. ಅಭ್ಯರ್ಥಿಯು ಶೈಕ್ಷಣಿಕ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಗಣಕಯಂತ್ರದಲ್ಲಿ (ಕಂಪ್ಯೂಟರ) ಬೆರಳಚ್ಚು ಮಾಡುವ ಕೌಶಲ್ಯ ಪರೀಕ್ಷೆಯಲ್ಲಿ ಗಳಿಸುವ ಶೇಕಡವಾರು ಅಂಕಗಳ ಆಧಾರದ ಮೇಲೆ 1:5 ರ ಅನುಪಾತದಲ್ಲಿ ಸಂದರ್ಶನ ನಡೆಸಲಾಗುವದು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನ 05 ಅಂಕಗಳನ್ನು ಒಳಗೊಂಡಿದ್ದು ಕನಿಷ್ಠ 2 ಅಂಕವನ್ನು ಪಡೆದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವದು

3. ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯರಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು.

ವಯೋಮಿತಿಃ- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಕನಿಷ್ಠ – 18 ವರ್ಷಗಳು
ಗರಿಷ್ಠ – 35 ವರ್ಷಗಳು
ಪ್ರವರ್ಗ-II (ಎ) , III(ಎ) ಹಾಗೂ III(ಬಿ)ಅಭ್ಯರ್ಥಿಗಳಿಗೆ 38 ವರ್ಷಗಳು
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-I ರ ಅಭ್ಯರ್ಥಿಗಳಿಗೆ 40 ವರ್ಷಗಳು

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾ ಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಆ | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| ಇ | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಈ | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಉ | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಊ | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಋ | ವಿಧವೆಯಾಗಿದ್ದಲ್ಲಿ ( ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ ) | 10 ವರ್ಷಗಳು |

| | | |
|---|---|---|
| ಎ | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ(ರದ್ದಿಯಾತಿ)ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣಪತ್ರ ವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದ ಪ್ರಮಾಣಪತ್ರ | 10 ವರ್ಷಗಳು |

<u>ಅರ್ಜಿ ಸಲ್ಲಿಸುವ ವಿಧಾನಃ</u>

ನಿಗದಿತ ಅರ್ಜಿ ಶುಲ್ಕ ಮತ್ತು ಶುಲ್ಕ ಪಾವತಿಸುವ ವಿಧಾನಃ

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 100/- |
| ಪ್ರವರ್ಗ-II(ಎ),II(ಬಿ), III(ಬಿ)ಹಾಗೂ III(ಬಿ) ಅಭ್ಯರ್ಥಿಗಳಿಗೆ | ರೂ. 150/- |
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | ರೂ. 300/- |

ನಿಗದಿತ ಅರ್ಜಿ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ https://uttarakannada.dcourts.gov.in//notice-category/recruitments/. ಲಿಂಕ್ ಮುಖಾಂತರ online payment through net banking / credit card / debit card/ UPI ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್, ಡಿಮ್ಯಾಂಡ್ ಡ್ರಾಫ್ಟ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸಲು ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**<u>ಅಭ್ಯರ್ಥಿಗಳನ್ನು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.</u>**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯನ್ನು ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
3. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

4. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

◆ ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5c.m.ಉದ್ದ x 3.5c.m. ಅಗಲವುಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

◆ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

◆ ಅಭ್ಯರ್ಥಿಯ ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5c.m ಉದ್ದ x 7.5c.m. ಅಗಲವುಳ್ಳದ್ದಾಗಿರಬೇಕು ಮತ್ತು 25kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು) ಅಪ್ ಲೋಡ್ ಮಾಡಬೇಕು.

5. ಅಭ್ಯರ್ಥಿಯ ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ /ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ನಿಗದಿತ ಅರ್ಜಿ ಶುಲ್ಕವನ್ನು ಜಾಗರೂಕತೆಯಿಂದ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ / ತಪ್ಪಾಗಿ ಪಾವತಿಸಿದ (ಕಡಿಮೆ ಅಥವಾ ಹೆಚ್ಚುವರಿಯಾಗಿ) ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು / ಸಲ್ಲಿಸಲು ದಿನಾಂಕಃ **19/07/2024** ರ ರಾತ್ರಿ **11.59** ರವರೆಗೆ ಕಾಲಾವಕಾಶವಿರುತ್ತದೆ ಮತ್ತು ಶುಲ್ಕವನ್ನು ಪಾವತಿಸಲು ದಿನಾಂಕಃ**20/07/2024** ಕೊನೆಯ ದಿನಾಂಕವಾಗಿರುತ್ತದೆ.

8. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

9. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.

10. ಸೇವಾನಿರತ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 11ರನ್ವಯ ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿಗಳನ್ವಯ ತಾವು ಸೇವೆ ಸಲ್ಲಿಸುತ್ತಿರುವ ಪ್ರಾಧಿಕಾರದಿಂದ ನಡೆದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಹಾಜರುಪಡಿಸತಕ್ಕದ್ದು

11. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ 1ರ ಅಭ್ಯರ್ಥಿಗಳು ನಮೂನೆ ಇ ಯಲ್ಲಿ ಮತ್ತು ಪ್ರವರ್ಗ 2(ಎ), 2(ಬಿ), 3(ಎ) ಮತ್ತು 3(ಬಿ) ಗೆ ಸೇರಿದ ಅಭ್ಯರ್ಥಿಗಳು ನಮೂನೆ ಎಫ್‌ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

12. ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ, ಮೊಹರು ಪಡೆದಿರುವ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗಿರುತ್ತಾರೆ.

13. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣಪತ್ರ ನಮೂನೆ-2ರ ಜೊತೆ ಕಡ್ಡಾಯವಾಗಿ ನಮೂನೆ-1ರಲ್ಲಿ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

14. ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ, ಮೊಹರು ಪಡೆದಿರುವ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

15. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣಪತ್ರವನ್ನು ದಿನಾಂಕಃ ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

16. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನೆನಿ/2001 ರಲ್ಲಿ ನಿಗದಿಪಿಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

17. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಹಾಗೂ ಕೊನೆಯದಾಗಿ ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆಯಿಂದ ನಡತೆ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

18. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

19. ಆಯ್ಕೆಯಾದ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

20. ನೇಮಕಾತಿ ಹೊಂದಿದ ಅಭ್ಯರ್ಥಿಗಳು ಹೊಸ ಪಿಂಚಣಿ ಯೋಜನೆಯ (NPS) ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

21. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಸ್ಪರ್ಧಾತ್ಮಕ / ಕೌಶಲ್ಯ ಪರೀಕ್ಷೆ ನಡೆಸಲಾಗುವುದು. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

22. ಈ ಅಧಿಸೂಚನೆಯಲ್ಲಿ ಹೊರಡಿಸಿರುವ ಹುದ್ದೆಗಳು ಬದಲಾವಣೆಯಾಗುವ ಸಾಧ್ಯತೆಯಿರುತ್ತದೆ.

23. ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ತಾವು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಅಗತ್ಯ ಮೂಲದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಸಮಯದಲ್ಲಿ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡ ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅವರು ಕ್ರಿಮಿನಲ್ ಪ್ರಾಸಿಕ್ಯೂಷನಗೂ ಸಹ ಗುರಿಯಾಗಬೇಕಾಗುತ್ತದೆ

24. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು

Sd/- 14/6/24

ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ, ಕಾರವಾರ.

**ಪ್ರತಿಯನ್ನುಃ-**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

**ಪ್ರತಿಯನ್ನು ಮಾಹಿತಿಗಾಗಿಃ-**

1. ರಾಜ್ಯದ ಎಲ್ಲಾ ಜಿಲ್ಲೆಗಳ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿ.
2. ಉತ್ತರ ಕನ್ನಡ ಕಾರವಾರ ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆಗಾಗಿ
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ರಾಜ್ಯದ ಎರಡು ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಣೆಗಾಗಿ.
4. ಆಯುಕ್ತರು, ವಾರ್ತಾ ಇಲಾಖೆ, ನಂ. 17, ಭಗವಾನ್ ಮಹಾವೀರ್ ಜೈನ್, (ಇನ್‌ಫೆಂಟ್ರಿ) ರಸ್ತೆ, ಬೆಂಗಳೂರು-560 001 - ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ (ದ್ವಿಪ್ರತಿಯಲ್ಲಿ).
5. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-ರಾಜ್ಯ ಪತ್ರದಲ್ಲಿ ಪ್ರಕಟಿಸಿ ಒಂದು ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಕೋರಿದೆ.
6. ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ.
7. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕಾರವಾರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
8. ನೋಡಲ್ ಅಧಿಕಾರಿ (ಇ-ಗೆಜೆಟ್)/ಹಿರಿಯ ಶಿರಸ್ತೇದಾರರು, ನಗದು ವಿಭಾಗ, ಜಿಲ್ಲಾ ನ್ಯಾಯಾಲಯ, ಕಾರವಾರ ಇವರಿಗೆ ಕರ್ನಾಟಕ ಇ-ರಾಜ್ಯ ಪತ್ರ ಜಾಲತಾಣದಲ್ಲಿ ಪ್ರಕಟಿಸಲು ನಿರ್ದೇಶಿಸಲಾಗಿದೆ
9. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ
10. ಜಿಲ್ಲಾ ಗ್ರಂಥಾಲಯ, ಕಾರವಾರ ಸೂಚನಾ ಫಲಕಕ್ಕೆ
11. ಕಾರವಾರ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸೂಚನಾ ಫಲಕಕ್ಕೆ

**ಉತ್ತರ ಕನ್ನಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವ ಕಛೇರಿ, ಕಾರವಾರ ನೇಮಕಾತಿ**

**ಅಧಿಸೂಚನೆ ಸಂಖ್ಯೆ 2/2024**

**ದಿನಾಂಕಃ 14/06/2024**

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಆರಂಭದ ದಿನಾಂಕಃ 20/06/2024**

**ಕೊನೆಯ ದಿನಾಂಕಃ 19/07/2024 ರ ರಾತ್ರಿ 11.59 ಗಂಟೆಯವರೆಗೆ**

**ಆನ್‌ಲೆನ್ ಅಂದರೆ ಡೆಬಿಟ್ ಕಾರ್ಡ/ಕ್ರೆಡಿಟ್ ಕಾರ್ಡ/ಯು.ಪಿ.ಐ/ನೆಟ್ ಬ್ಯಾಂಕಿಂಗ್**

**ಮುಖಾಂತರ ಶುಲ್ಕ ಪಾವತಿಸಲು 20/07/2024 ರಾತ್ರಿ 11.59 ರವರೆಗೆ ಅವಕಾಶ ಇರುತ್ತದೆ.**

*****

ವಿಷಯಃ ಉತ್ತರ ಕನ್ನಡ ಕಾರವಾರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ನಕಲು-ಬೆರಳಚ್ಚುಗಾರ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖಃ ಉಚ್ಚನ್ಯಾಯಾಲಯ ಪತ್ರ ಸಂಖ್ಯೆ ಎಲ್‌ಸಿಎ-2/128/12 ದಿನಾಂಕಃ21/12/2019, 27/01/2022 ಮತ್ತು 11/09/2023.

*****

ಉತ್ತರ ಕನ್ನಡ ಕಾರವಾರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 3 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಬಾಹ್ಯ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಕಾರವಾರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://uttarakannada.dcourts.gov.in/notice-category/recruitments/. ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕಃ **20/06/2024** ರಿಂದ ದಿನಾಂಕಃ **19/07/2024** ರ ರಾತ್ರಿ 11.59 ರವರೆಗೆ ಸಲ್ಲಿಸಬಹುದು ಮತ್ತು ಪೂರ್ಣ ಅರ್ಜಿಯನ್ನು ಸಲ್ಲಿಸಿದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕಃ **20/07/2024** ಆಗಿರುತ್ತದೆ. ಆನ್‌ಲೈನ್ ಹೊರತುಪಡಿಸಿ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ನಕಲು-ಬೆರಳಚ್ಚುಗಾರ (Typist): ಒಟ್ಟು 3 ಹುದ್ದೆಗಳು**

ವೇತನ ಶ್ರೇಣಿಃ 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

**ಹುದ್ದೆಗಳ ವರ್ಗೀಕರಣ**

| ಪ್ರವರ್ಗ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|
| ಪರಿಶಿಷ್ಟ ಜಾತಿ | 1 | - | - | - | 1 |
| ಪರಿಶಿಷ್ಟ ಪಂಗಡ | 1 | - | - | - | 1 |
| ಪ್ರವರ್ಗ-I | - | - | - | - | - |
| ಪ್ರವರ್ಗ-II(ಎ) | - | - | - | - | - |
| ಪ್ರವರ್ಗ-III(ಬಿ) | - | - | - | - | - |
| ಸಾಮಾನ್ಯ | 1 | - | - | - | 1 |
| ಒಟ್ಟು | 3 | - | - | - | 3 |

* ಅಂಧ ಮತ್ತು ದೃಷ್ಟಿಮಾಂಧ್ಯ (Blind and low vision)

ಶೈಕ್ಷಣಿಕ ವಿದ್ಯಾರ್ಹತೆಃ

1. ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಕಮರ್ಷಿಯಲ್ ಪ್ರಾಕ್ಟೀಸನಲ್ಲಿ ಮೂರು ವರ್ಷಗಳ ಡಿಪ್ಲೋಮಾ (Three years Diploma in Commercial Practice) ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗಾಗಿ ಹೊಂದಿರಬೇಕು.

2. ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕಿರಿಯ ಶ್ರೇಣಿ ಬೆರಳಚ್ಚು (Junior Grade Typewriting) ಪರೀಕ್ಷೆಯಲ್ಲಿ ಅಥವಾ ಸೆಕ್ರೆಟರಿಯಲ್ ಪ್ರಾಕ್ಟೀಸ್ ಡಿಪ್ಲೋಮಾ (Diploma in Secretarial Practice) ಪರೀಕ್ಷೆಯಲ್ಲಿ ಉತ್ತಿರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗಾಗಿ ಹೊಂದಿರಬೇಕು.

3. ಕಛೇರಿ ಕಾರ್ಯಕಲಾಪಗಳಿಗೆ ಸಂಬಂಧಿಸಿದಂತೆ ಗಣಕಯಂತ್ರದ (ಕಂಪ್ಯೂಟರ್) ಜ್ಞಾನ ಅವಶ್ಯಕವಾಗಿರುತ್ತದೆ.

**ಆಯ್ಕೆ ವಿಧಾನಃ**

1. ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು)(ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2. ಅಭ್ಯರ್ಥಿಯು ಶೈಕ್ಷಣಿಕ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಗಣಕಯಂತ್ರದಲ್ಲಿ (ಕಂಪ್ಯೂಟರ) ಬೆರಳಚ್ಚು ಮಾಡುವ ಕೌಶಲ್ಯ ಪರೀಕ್ಷೆಯಲ್ಲಿ ಗಳಿಸುವ ಶೇಕಡವಾರು ಅಂಕಗಳ ಆಧಾರದ ಮೇಲೆ 1:5ರ ಅನುಪಾತದಲ್ಲಿ ಸಂದರ್ಶನ ನಡೆಸಲಾಗುವದು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನ 05 ಅಂಕಗಳನ್ನು ಒಳಗೊಂಡಿದ್ದು ಕನಿಷ್ಠ 2 ಅಂಕವನ್ನು ಪಡೆದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವದು.

3. ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯರಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು.

ವಯೋಮಿತಿಃ- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಕನಿಷ್ಠ – 18 ವರ್ಷಗಳು
ಗರಿಷ್ಠ – 35 ವರ್ಷಗಳು
ಪ್ರವರ್ಗ-II (ಎ) , III(ಎ) ಹಾಗೂ III(ಬಿ)ಅಭ್ಯರ್ಥಿಗಳಿಗೆ 38 ವರ್ಷಗಳು
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-I ರ ಅಭ್ಯರ್ಥಿಗಳಿಗೆ 40 ವರ್ಷಗಳು

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾ ಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಆ | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| ಇ | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಈ | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಉ | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಊ | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಋ | ವಿಧವೆಯಾಗಿದ್ದಲ್ಲಿ ( ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ ) | 10 ವರ್ಷಗಳು |

| | | |
|---|---|---|
| ಎ | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ(ರದ್ದಿಯಾತಿ)ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣಪತ್ರ ವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದ ಪ್ರಮಾಣಪತ್ರ | 10 ವರ್ಷಗಳು |

ಅರ್ಜಿ ಸಲ್ಲಿಸುವ ವಿಧಾನಃ

ನಿಗದಿತ ಅರ್ಜಿ ಶುಲ್ಕ ಮತ್ತು ಶುಲ್ಕ ಪಾವತಿಸುವ ವಿಧಾನಃ

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 100/- |
| ಪ್ರವರ್ಗ-II(ಎ),II(ಬಿ), III(ಬಿ)ಹಾಗೂ III(ಬಿ) ಅಭ್ಯರ್ಥಿಗಳಿಗೆ | ರೂ. 150/- |
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | ರೂ. 300/- |

ನಿಗದಿತ ಅರ್ಜಿ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ https://uttarakannada.dcourts.gov.in//notice-category/recruitments/. ಲಿಂಕ್ ಮುಖಾಂತರ online payment through net banking / credit card / debit card/ UPI ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್, ಡಿಮ್ಯಾಂಡ್ ಡ್ರಾಫ್ಟ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸಲು ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭರ್ಥಿಗಳನ್ನು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯನ್ನು ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

4. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

- ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5c.m.ಉದ್ದ x 3.5c.m. ಅಗಲವುಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು

- ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

- ಅಭ್ಯರ್ಥಿಯ ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5c.m ಉದ್ದ x 7.5c.m. ಅಗಲವುಳ್ಳದ್ದಾಗಿರಬೇಕು ಮತ್ತು 25kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು) ಅಪ್ ಲೋಡ್ ಮಾಡಬೇಕು.

5. ಅಭ್ಯರ್ಥಿಯ ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ /ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ನಿಗದಿತ ಅರ್ಜಿ ಶುಲ್ಕವನ್ನು ಜಾಗರೂಕತೆಯಿಂದ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ / ತಪ್ಪಾಗಿ ಪಾವತಿಸಿದ (ಕಡಿಮೆ ಅಥವಾ ಹೆಚ್ಚುವರಿಯಾಗಿ) ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು / ಸಲ್ಲಿಸಲು ದಿನಾಂಕಃ **19/07/2024** ರ ರಾತ್ರಿ **11.59** ರವರೆಗೆ ಕಾಲಾವಕಾಶವಿರುತ್ತದೆ ಮತ್ತು ಶುಲ್ಕವನ್ನು ಪಾವತಿಸಲು ದಿನಾಂಕಃ **20/07/2024** ಕೊನೆಯ ದಿನಾಂಕವಾಗಿರುತ್ತದೆ.

8. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

9. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.

10. ಸೇವಾನಿರತ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 11ರನ್ವಯ ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿಗಳನ್ವಯ ತಾವು ಸೇವೆ ಸಲ್ಲಿಸುತ್ತಿರುವ ಪ್ರಾಧಿಕಾರದಿಂದ ನಡೆದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಹಾಜರುಪಡಿಸತಕ್ಕದ್ದು

11. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ 1ರ ಅಭ್ಯರ್ಥಿಗಳು ನಮೂನೆ ಇ ಯಲ್ಲಿ ಮತ್ತು ಪ್ರವರ್ಗ 2(ಎ), 2(ಬಿ), 3(ಎ) ಮತ್ತು 3(ಬಿ) ಗೆ ಸೇರಿದ ಅಭ್ಯರ್ಥಿಗಳು ನಮೂನೆ ಎಫ್‌ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

12. ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮೊಹರು ಪಡೆದಿರುವ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗಿರುತ್ತಾರೆ

13. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣಪತ್ರ ನಮೂನೆ-2ರ ಜೊತೆ ಕಡ್ಡಾಯವಾಗಿ ನಮೂನೆ-1ರಲ್ಲಿ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

14. ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ, ಮೊಹರು ಪಡೆದಿರುವ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

15. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣಪತ್ರವನ್ನು ದಿನಾಂಕಃ ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

16. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನೆನಿ/2001 ರಲ್ಲಿ ನಿಗದಿಪಿಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

17. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಹಾಗೂ ಕೊನೆಯದಾಗಿ ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆಯಿಂದ ನಡತೆ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

18. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

19. ಆಯ್ಕೆಯಾದ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

20. ನೇಮಕಾತಿ ಹೊಂದಿದ ಅಭ್ಯರ್ಥಿಗಳು ಹೊಸ ಪಿಂಚಣಿ ಯೋಜನೆಯ (NPS) ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

21. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಸ್ಪರ್ಧಾತ್ಮಕ / ಕೌಶಲ್ಯ ಪರೀಕ್ಷೆ ನಡೆಸಲಾಗುವುದು. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

22. ಈ ಅಧಿಸೂಚನೆಯಲ್ಲಿ ಹೊರಡಿಸಿರುವ ಹುದ್ದೆಗಳು ಬದಲಾವಣೆಯಾಗುವ ಸಾಧ್ಯತೆಯಿರುತ್ತದೆ.

23. ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ತಾವು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಅಗತ್ಯ ಮೂಲದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಸಮಯದಲ್ಲಿ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡ ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅವರು ಕ್ರಿಮಿನಲ್ ಪ್ರಾಸಿಕ್ಯೂಷನಗೂ ಸಹ ಗುರಿಯಾಗಬೇಕಾಗುತ್ತದೆ

24. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು

ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ, ಕಾರವಾರ.

**ಪ್ರತಿಯನ್ನುಃ-**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

**ಪ್ರತಿಯನ್ನು ಮಾಹಿತಿಗಾಗಿಃ-**

1. ರಾಜ್ಯದ ಎಲ್ಲಾ ಜಿಲ್ಲೆಗಳ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿ.
2. ಉತ್ತರ ಕನ್ನಡ ಕಾರವಾರ ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆಗಾಗಿ
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ರಾಜ್ಯದ ಎರಡು ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಣೆಗಾಗಿ.
4. ಆಯುಕ್ತರು, ವಾರ್ತಾ ಇಲಾಖೆ, ನಂ. 17, ಭಗವಾನ್ ಮಹಾವೀರ್ ಜೈನ್, (ಇನ್‌ಫೆಂಟ್ರಿ) ರಸ್ತೆ, ಬೆಂಗಳೂರು-560 001 - ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ (ದ್ವಿಪ್ರತಿಯಲ್ಲಿ).
5. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-ರಾಜ್ಯ ಪತ್ರದಲ್ಲಿ ಪ್ರಕಟಿಸಿ ಒಂದು ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಕೋರಿದೆ.
6. ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ.
7. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕಾರವಾರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
8. ನೋಡಲ್ ಅಧಿಕಾರಿ (ಇ-ಗೆಜೆಟ್)/ಹಿರಿಯ ಶಿರಸ್ತೇದಾರರು, ನಗದು ವಿಭಾಗ, ಜಿಲ್ಲಾ ನ್ಯಾಯಾಲಯ, ಕಾರವಾರ ಇವರಿಗೆ ಕರ್ನಾಟಕ ಇ-ರಾಜ್ಯ ಪತ್ರ ಜಾಲತಾಣದಲ್ಲಿ ಪ್ರಕಟಿಸಲು ನಿರ್ದೇಶಿಸಲಾಗಿದೆ
9. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ
10. ಜಿಲ್ಲಾ ಗ್ರಂಥಾಲಯ, ಕಾರವಾರ ಸೂಚನಾ ಫಲಕಕ್ಕೆ
11. ಕಾರವಾರ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸೂಚನಾ ಫಲಕಕ್ಕೆ
12. ತಂತ್ರಾಂಶ ತಂತ್ರಜ್ಞರು, ಕಂಪ್ಯೂಟರ ವಿಭಾಗ, ಜಿಲ್ಲಾ ನ್ಯಾಯಾಲಯ, ಕಾರವಾರ ಇವರಿಗೆ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲು ಹಾಗೂ ಗೌರವಾನ್ವಿತ ಉಚ್ಚನ್ಯಾಯಾಲಯದ ಕಂಪ್ಯೂಟರ್ ವಿಭಾಗದ ಸಹಕಾರದೊಂದಿಗೆ ಆನ್‌ಲೈನ್ ಅಧಿಸೂಚನೆಯ ಕಾರ್ಯಗಳು ಪೂರ್ಣಗೊಳ್ಳುವವರೆಗೂ ತಾಂತ್ರಿಕ ನೆರವನ್ನು ನೀಡಲು ನಿರ್ದೇಶಿಸಲಾಗಿದೆ.

ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ, ಕಾರವಾರ.

**ಉತ್ತರ ಕನ್ನಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವ ಕಛೇರಿ, ಕಾರವಾರ ನೇಮಕಾತಿ**

**ಅಧಿಸೂಚನೆ ಸಂಖ್ಯೆ: 3/2024**

**ದಿನಾಂಕ: 14/06/2024**

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಆರಂಭದ ದಿನಾಂಕ: 20/06/2024**

**ಕೊನೆಯ ದಿನಾಂಕ: 19/07/2024 ರ ರಾತ್ರಿ 11.59 ಗಂಟೆಯವರೆಗೆ**

**ಆನ್‌ಲೆನ್ ಅಂದರೆ ಡೆಬಿಟ್ ಕಾರ್ಡ/ಕ್ರೆಡಿಟ್ ಕಾರ್ಡ/ಯು.ಪಿ.ಐ/ನೆಟ್ ಬ್ಯಾಂಕಿಂಗ್**

**ಮುಖಾಂತರ ಶುಲ್ಕ ಪಾವತಿಸಲು 20/07/2024 ರಾತ್ರಿ 11.59 ರವರೆಗೆ ಅವಕಾಶ ಇರುತ್ತದೆ.**

*****

ವಿಷಯ: ಉತ್ತರ ಕನ್ನಡ ಕಾರವಾರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಆದೇಶಜಾರಿಕಾರ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ: 1. ಉಚ್ಚನ್ಯಾಯಾಲಯ ಪತ್ರ ಸಂಖ್ಯೆ: ಎಲ್‌ಸಿಎ-2/128/12 ದಿನಾಂಕ:18/09/2018.

2. ಉಚ್ಚನ್ಯಾಯಾಲಯ ಪತ್ರ ಸಂಖ್ಯೆ: ಎಲ್‌ಸಿಎ-2/128/12 ದಿನಾಂಕ:21/12/2019, 27/01/2022 ಮತ್ತು 11/09/2023.

*****

ಉತ್ತರ ಕನ್ನಡ ಕಾರವಾರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 3 ಹಿಂಬಾಕಿ ಹುದ್ದೆ ಸೇರಿದಂತೆ ಒಟ್ಟು 20 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಬಾಹ್ಯ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಕಾರವಾರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://uttarakannada.dcourts.gov.in/notice-category/recruitments/. ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: **20/06/2024** ರಿಂದ ದಿನಾಂಕ: **19/07/2024** ರ ರಾತ್ರಿ 11.59 ರವರೆಗೆ ಸಲ್ಲಿಸಬಹುದು ಮತ್ತು ಪೂರ್ಣ ಅರ್ಜಿಯನ್ನು ಸಲ್ಲಿಸಿದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: **20/07/2024** ಆಗಿರುತ್ತದೆ. ಆನ್‌ಲೈನ್ ಹೊರತುಪಡಿಸಿ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಆದೇಶ ಜಾರಿಕಾರ(Process Server): ಒಟ್ಟು 20 ಹುದ್ದೆಗಳು**

ವೇತನ ಶ್ರೇಣಿ: 19950-450-20400-500-22400-550-24600-600-27000-650-29600-750-32600-850-36000-950-37900 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

ಹುದ್ದೆಗಳ ವರ್ಗೀಕರಣ

| ಪ್ರವರ್ಗ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|---|---|---|
| ಪರಿಶಿಷ್ಟ ಜಾತಿ | 1 | 1 | 1 | – | 3 |
| ಪರಿಶಿಷ್ಟ ಪಂಗಡ | 1 | 1 | – | – | 2 |
| ಪ್ರವರ್ಗ-I | 1 | – | – | – | 1 |
| ಪ್ರವರ್ಗ-II(ಎ) | 1 | 1 | – | – | 2 |
| ಪ್ರವರ್ಗ-II(ಬಿ) | 1 | – | – | – | 1 |
| ಪ್ರವರ್ಗ-III(ಎ) | 1 | – | – | – | 1 |
| ಪ್ರವರ್ಗ-III(ಬಿ) | 1 | – | – | – | 1 |
| ಸಾಮಾನ್ಯ | 2 | 3 | 3 | 1* | 9 |
| ಒಟ್ಟು | 9 | 6 | 4 | 1* | 20 |

* ಅಂಧ ಮತ್ತು ದೃಷ್ಟಿಮಾಂಧ್ಯ (Blind and low vision)

ಶೈಕ್ಷಣಿಕ ವಿದ್ಯಾರ್ಹತೆ:

1. ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗಾಗಿ ಹೊಂದಿರಬೇಕು.

2. ಭಾರಿ /ಹಗುರ ವಾಹನ ಚಾಲನಾ ಅನುಜ್ಞಾಪತ್ರ (Driving license - HMV/LMV) ಹೊಂದಿದವರಿಗೆ ಆದ್ಯತೆ ನೀಡಲಾಗುವುದು.

ಆಯ್ಕೆ ವಿಧಾನಃ

1. ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು)(ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2. ಅಭ್ಯರ್ಥಿಯು ಶೈಕ್ಷಣಿಕ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳಂತೆ (1:25ರ ಅನುಪಾತದಲ್ಲಿ) ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಅಧಿಸೂಚಿಸಿರುವ ಹುದ್ದೆಗಳ ಮೀಸಲಾತಿಗನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವದು. ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

3. ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯರಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು.

ವಯೋಮಿತಿಃ- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಕನಿಷ್ಠ – 18 ವರ್ಷಗಳು
ಗರಿಷ್ಠ – 35 ವರ್ಷಗಳು
ಪ್ರವರ್ಗ-II (ಎ) , III(ಎ) ಹಾಗೂ III(ಬಿ)ಅಭ್ಯರ್ಥಿಗಳಿಗೆ 38 ವರ್ಷಗಳು
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-I ರ ಅಭ್ಯರ್ಥಿಗಳಿಗೆ 40 ವರ್ಷಗಳು

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಆ | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| ಇ | National Cadet Corps ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಈ | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| ಉ | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಊ | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಋ | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ ) | 10 ವರ್ಷಗಳು |

| | | |
|---|---|---|
| ಎ | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ(ರದ್ದಿಯಾತಿ)ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದ ಪ್ರಮಾಣಪತ್ರ | 10 ವರ್ಷಗಳು |

ಅರ್ಜಿ ಸಲ್ಲಿಸುವ ವಿಧಾನಃ

ನಿಗದಿತ ಅರ್ಜಿ ಶುಲ್ಕ ಮತ್ತು ಶುಲ್ಕ ಪಾವತಿಸುವ ವಿಧಾನಃ

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 100/- |
| ಪ್ರವರ್ಗ-II(ಎ),II(ಬಿ), III(ಬಿ)ಹಾಗೂ III(ಬಿ) ಅಭ್ಯರ್ಥಿಗಳಿಗೆ | ರೂ. 150/- |
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | ರೂ. 300/- |

ನಿಗದಿತ ಅರ್ಜಿ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ https://uttarakannada.dcourts.gov.in//notice-category/recruitments/. ಲಿಂಕ್ ಮುಖಾಂತರ online payment through net banking / credit card / debit card/ UPI ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್, ಡಿಮ್ಯಾಂಡ್ ಡ್ರಾಫ್ಟ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸಲು ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳನ್ನು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯನ್ನು ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3. ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು

- ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5c.m.ಉದ್ದ x 3.5c.m. ಅಗಲವುಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು
- ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್ ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).
- ಅಭ್ಯರ್ಥಿಯ ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5c.m ಉದ್ದ x 7.5c.m. ಅಗಲವುಳ್ಳದ್ದಾಗಿರಬೇಕು ಮತ್ತು 25kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು) ಅಪ್ ಲೋಡ್ ಮಾಡಬೇಕು.

4. ಅಭ್ಯರ್ಥಿಯ ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ /ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ನಿಗದಿತ ಅರ್ಜಿ ಶುಲ್ಕವನ್ನು ಜಾಗರೂಕತೆಯಿಂದ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ / ತಪ್ಪಾಗಿ ಪಾವತಿಸಿದ (ಕಡಿಮೆ ಅಥವಾ ಹೆಚ್ಚುವರಿಯಾಗಿ) ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು / ಸಲ್ಲಿಸಲು ದಿನಾಂಕಃ **19/07/2024** ರ ರಾತ್ರಿ **11.59** ರವರೆಗೆ ಕಾಲಾವಕಾಶವಿರುತ್ತದೆ ಮತ್ತು ಶುಲ್ಕವನ್ನು ಪಾವತಿಸಲು ದಿನಾಂಕಃ**20/07/2024** ಕೊನೆಯ ದಿನಾಂಕವಾಗಿರುತ್ತದೆ.

7. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

8. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.

9. ಸೇವಾನಿರತ ಅಭ್ಯರ್ಥಿಗಳು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 11ರನ್ವಯ ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿಗಳನ್ವಯ ತಾವು ಸೇವೆ ಸಲ್ಲಿಸುತ್ತಿರುವ ಪ್ರಾಧಿಕಾರದಿಂದ ನಡೆದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಹಾಜರುಪಡಿಸತಕ್ಕದ್ದು

10. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ 1ರ ಅಭ್ಯರ್ಥಿಗಳು ನಮೂನೆ ಇ ಯಲ್ಲಿ ಮತ್ತು ಪ್ರವರ್ಗ 2(ಎ), 2(ಬಿ), 3(ಎ) ಮತ್ತು 3(ಬಿ) ಗೆ ಸೇರಿದ ಅಭ್ಯರ್ಥಿಗಳು ನಮೂನೆ ಎಫ್‌ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು..

11. ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮೊಹರು ಪಡೆದಿರುವ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗಿರುತ್ತಾರೆ

12. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣಪತ್ರ ನಮೂನೆ-2ರ ಜೊತೆ ಕಡ್ಡಾಯವಾಗಿ ನಮೂನೆ-1ರಲ್ಲಿ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

13. ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ, ಮೊಹರು ಪಡೆದಿರುವ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು

14. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣಪತ್ರವನ್ನು ದಿನಾಂಕಃ ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

15. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನೆನಿ/2001 ರಲ್ಲಿ ನಿಗದಿಪಿಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು.

16. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಹಾಗೂ ಕೊನೆಯದಾಗಿ ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆಯಿಂದ ನಡತೆ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

17. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು.

18. ಆಯ್ಕೆಯಾದ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಸರ್ಕಾರವು ಅನುಮೊದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

19. ನೇಮಕಾತಿ ಹೊಂದಿದ ಅಭ್ಯರ್ಥಿಗಳು ಹೊಸ ಪಿಂಚಣಿ ಯೋಜನೆಯ (NPS) ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

20. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಸ್ಪರ್ಧಾತ್ಮಕ / ಕೌಶಲ್ಯ ಪರೀಕ್ಷೆ ನಡೆಸಲಾಗುವುದು. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

21. ಈ ಅಧಿಸೂಚನೆಯಲ್ಲಿ ಹೊರಡಿಸಿರುವ ಹುದ್ದೆಗಳು ಬದಲಾವಣೆಯಾಗುವ ಸಾಧ್ಯತೆಯಿರುತ್ತದೆ.

22. ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ತಾವು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಅಗತ್ಯ ಮೂಲದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಸಮಯದಲ್ಲಿ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡ ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅವರು ಕ್ರಿಮಿನಲ್ ಪ್ರಾಸಿಕ್ಯೂಷನಗೂ ಸಹ ಗುರಿಯಾಗಬೇಕಾಗುತ್ತದೆ.

23. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು

ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ, ಕಾರವಾರ.

**ಪ್ರತಿಯನ್ನುಃ–**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

**ಪ್ರತಿಯನ್ನು ಮಾಹಿತಿಗಾಗಿಃ-**

1. ರಾಜ್ಯದ ಎಲ್ಲಾ ಜಿಲ್ಲೆಗಳ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿ.
2. ಉತ್ತರ ಕನ್ನಡ ಕಾರವಾರ ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆಗಾಗಿ.
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ರಾಜ್ಯದ ಎರಡು ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಣೆಗಾಗಿ.
4. ಆಯುಕ್ತರು, ವಾರ್ತಾ ಇಲಾಖೆ, ನಂ. 17, ಭಗವಾನ್ ಮಹಾವೀರ್ ಜೈನ್, (ಇನ್‌ಫೆಂಟ್ರಿ) ರಸ್ತೆ, ಬೆಂಗಳೂರು-560 001 - ಇವರಿಗೆ ಪ್ರಾದೇಶಿಕ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ (ದ್ವಿಪ್ರತಿಯಲ್ಲಿ).
5. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-ರಾಜ್ಯ ಪತ್ರದಲ್ಲಿ ಪ್ರಕಟಿಸಿ ಒಂದು ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಕೋರಿದೆ.
6. ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ.
7. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕಾರವಾರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
8. ನೋಡಲ್ ಅಧಿಕಾರಿ (ಇ-ಗೆಜೆಟ್)/ಹಿರಿಯ ಶಿರಸ್ತೇದಾರರು, ನಗದು ವಿಭಾಗ, ಜಿಲ್ಲಾ ನ್ಯಾಯಾಲಯ, ಕಾರವಾರ ಇವರಿಗೆ ಕರ್ನಾಟಕ ಇ-ರಾಜ್ಯ ಪತ್ರ ಜಾಲತಾಣದಲ್ಲಿ ಪ್ರಕಟಿಸಲು ನಿರ್ದೇಶಿಸಲಾಗಿದೆ
9. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ
10. ಜಿಲ್ಲಾ ಗ್ರಂಥಾಲಯ, ಕಾರವಾರ ಸೂಚನಾ ಫಲಕಕ್ಕೆ
11. ಕಾರವಾರ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸೂಚನಾ ಫಲಕಕ್ಕೆ
12. ತಂತ್ರಾಂಶ ತಂತ್ರಜ್ಞರು, ಕಂಪ್ಯೂಟರ ವಿಭಾಗ, ಜಿಲ್ಲಾ ನ್ಯಾಯಾಲಯ, ಕಾರವಾರ ಇವರಿಗೆ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲು ಹಾಗೂ ಗೌರವಾನ್ವಿತ ಉಚ್ಚನ್ಯಾಯಾಲಯದ ಕಂಪ್ಯೂಟರ್ ವಿಭಾಗದ ಸಹಕಾರದೊಂದಿಗೆ ಆನ್‌ಲೈನ್ ಅಧಿಸೂಚನೆಯ ಕಾರ್ಯಗಳು ಪೂರ್ಣಗೊಳ್ಳುವವರೆಗೂ ತಾಂತ್ರಿಕ ನೆರವನ್ನು ನೀಡಲು ನಿರ್ದೇಶಿಸಲಾಗಿದೆ.

ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ, ಕಾರವಾರ.